**ಕರ್ನಾಟಕ ವಿಧಾನ ಪರಿಷತ್ತು**
**154ನೇ ಅಧಿವೇಶನ**
**ಸಂತಾಪ ಸೂಚನೆ**

**ಮಾನ್ಯ ಸಭಾಪತಿಯವರು:-**

**ವಿಧಾನ ಪರಿಷತ್ತಿನ ಮಾಜಿ ಶಾಸಕರು ಹಾಗೂ ಉಪ ಸಭಾಪತಿಗಳಾಗಿದ್ದ ಶತಾಯುಷಿ ಕೇಶವರಾವ್ ತಾತ್ಯ ನಿಟ್ಟೂರ್‌ಕರ್ ಅವರು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.**

**ಕೇಶವರಾವ್ ತಾತ್ಯ ನಿಟ್ಟೂರ್‌ಕರ್**

**ವಿಧಾನ ಪರಿಷತ್ತಿನ ಮಾಜಿ ಶಾಸಕರು ಹಾಗೂ ಉಪ ಸಭಾಪತಿಯವರಾಗಿದ್ದ ಶತಾಯುಷಿ ಕೇಶವರಾವ್ ನಿಟ್ಟೂರ್‌ಕರ್ ಅವರು ದಿನಾಂಕ:12.12.2024ರಂದು ನಿಧನ ಹೊಂದಿರುತ್ತಾರೆ.**

1922ರಲ್ಲಿ ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ನಿಟ್ಟೂರು ಗ್ರಾಮದಲ್ಲಿ ಜನಿಸಿದ್ದ ಶ್ರೀಯುತರು ಹೈದರಾಬಾದ್‌ನ ಕಾನೂನು ವಿಶ್ವವಿದ್ಯಾಲಯದಲ್ಲಿ ಕಾನೂನು ಪದವೀಧರರಾಗಿದ್ದು, ವೃತ್ತಿಯಲ್ಲಿ ವಕೀಲರಾಗಿದ್ದರು. ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿನ ವಿವಿಧ ಮಂಡಳಿಗಳಲ್ಲಿ ಅಧ್ಯಕ್ಷ, ಕಾರ್ಯದರ್ಶಿ ಹಾಗೂ ಸದಸ್ಯರಾಗಿಯೂ ಕಾರ್ಯನಿರ್ವಹಿಸಿದ್ದಲ್ಲದೆ ಹಲವಾರು ಶಿಕ್ಷಣ ಸಂಸ್ಥೆಗಳಲ್ಲಿಯೂ ಸಹ ಕಾರ್ಯನಿರ್ವಹಿಸಿದ್ದರು. 1958-1960, 1960-1966 ಹಾಗೂ 1966-1972ರವರೆಗೆ ಮೂರು ಬಾರಿ ಮೈಸೂರು ಈಶಾನ್ಯ ಶಿಕ್ಷಕರ ಕ್ಷೇತ್ರದಿಂದ ವಿಧಾನ ಪರಿಷತ್ತಿನ ಸದಸ್ಯರಾಗಿ ಆಯ್ಕೆಯಾಗಿ 1958-1960ರವರೆಗೆ ಉಪ ಸಭಾಪತಿಗಳಾಗಿ ಕಾರ್ಯನಿರ್ವಹಿಸಿದ್ದರು.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ಸ್ವಾತಂತ್ರ್ಯ ಹೋರಾಟಗಾರ ಹಾಗೂ ಸಜ್ಜನ ರಾಜಕಾರಣಿಯೊಬ್ಬರನ್ನು ಕಳೆದುಕೊಂಡಂತಾಗಿದೆ**

**<u>ಸಭಾನಾಯಕರು ಮತ್ತು ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:-</u>**

ಮೃತರ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

---2

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**(ಮೌನ ಆಚರಿಸಿದ ನಂತರ)**

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯ ನಿರ್ಣಯವನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.